## ಜೆಎಸ್‌ಎಸ್ ಮಹಾವಿದ್ಯಾಪೀಠ
## ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–291

**30 ಜುಲೈ 2022 * ಶನಿವಾರ * ಸಂಜೆ 6.00**

**ಜೆಎಸ್‌ಎಸ್ ವಿದ್ಯಾರ್ಥಿ ನಿಲಯ, ನಂಜುಮಳಿಗೆ, ಮೈಸೂರು**

---

### ದಿವ್ಯ ಆಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ
ಸುತ್ತೂರು ಶ್ರೀಕ್ಷೇತ್ರ

### ಅಧ್ಯಕ್ಷತೆ

**ಡಾ. ಎಂ.ಜಿ. ಬಸವರಾಜ**

ವಿಶ್ರಾಂತ ಪ್ರಾಧ್ಯಾಪಕರು
ಮೈಸೂರು ವಿಶ್ವವಿದ್ಯಾನಿಲಯ

### ಉಪನ್ಯಾಸ

**ಡಾ. ರಾಜಶೇಖರ ಜಮದಂಡಿ**

ಸಂಶೋಧನಾ ಮಾರ್ಗದರ್ಶಕರು
ಶ್ರೀನಿವಾಸ ವಿಶ್ವವಿದ್ಯಾಲಯ, ಮಂಗಳೂರು

**ವಿಷಯ : ಶರಣೆ ಅಕ್ಕಮ್ಮನ ವಚನಗಳಲ್ಲಿ ವ್ರತಾಚರಣೆ**

---

### ಪ್ರಾಯೋಜಕರು

**ಶ್ರೀಮತಿ ಎ.ಜಿ. ಭವಾನಿ ಮತ್ತು ಶ್ರೀ ಎಂ. ಶಿವಪ್ರಸಾದ್**

ಮಾಲೀಕರು, ಶ್ರೀ ಅಂಕನಾಥೇಶ್ವರ ಗ್ರಾಫಿಕ್ಸ್ ಅಂಡ್ ಪ್ರಿಂಟರ್ಸ್
ನಂ. 837, 12ನೇ ಕ್ರಾಸ್, ರಾಮಾನುಜ ರಸ್ತೆ, ಮೈಸೂರು

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996 ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಡಾ. ಎಂ.ಜಿ. ಬಸವರಾಜರವರು** ಮೈಸೂರು ವಿಶ್ವವಿದ್ಯಾನಿಲಯದ ಗಾಂಧಿ ಭವನದ ನಿವೃತ್ತ ನಿರ್ದೇಶಕರು. ಮಂಡ್ಯದ ಸರ್. ಎಂ. ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರದಲ್ಲಿ ಅರ್ಥಶಾಸ್ತ್ರ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಹಲವಾರು ಸಂಶೋಧನಾ ಯೋಜನೆಗಳಲ್ಲಿ ಕಾರ್ಯ ನಿರ್ವಹಿಸಿರುವರು. ವಿಶೇಷ ಚೇತನರ ಯೋಗಕ್ಷೇಮ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಇವರ ಸಂಶೋಧನಾ ವರದಿಯನ್ನು ರಾಜ್ಯ ಸರ್ಕಾರವು ಅಂಗೀಕರಿಸಿದೆ. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ವಿಚಾರಸಂಕಿರಣಗಳಲ್ಲಿ ಪ್ರಬಂಧ ಮಂಡಿಸಿದ್ದಾರೆ. ವಿವಿಧ ದೇಶಗಳಿಗೆ ಅಧ್ಯಯನ ಪ್ರವಾಸವನ್ನು ಮಾಡಿರುವರು. ಶಿಕ್ಷಣ, ಸಂಶೋಧನೆ ಮತ್ತು ಆಡಳಿತ ಕ್ಷೇತ್ರಗಳಲ್ಲಿನ ಇವರ ಸೇವೆಗೆ ಹಲವಾರು ಪ್ರಶಸ್ತಿ, ಪುರಸ್ಕಾರಗಳು ಸಂದಿವೆ.

**ಡಾ. ರಾಜಶೇಖರ ಜಮದಂಡಿಯವರು** ಮಂಗಳೂರಿನ ಶ್ರೀನಿವಾಸ ವಿಶ್ವವಿದ್ಯಾಲಯದಲ್ಲಿ ಸಂಶೋಧನಾ ಮಾರ್ಗದರ್ಶಕರಾಗಿದ್ದಾರೆ. ಮೈಸೂರಿನಲ್ಲಿರುವ ಶಾಸ್ತ್ರೀಯ ಕನ್ನಡ ಅಧ್ಯಯನ ಅತ್ಯುನ್ನತ ಕೇಂದ್ರದ ಹಿರಿಯ ಸಂಶೋಧಕರಾಗಿದ್ದರು. 20ಕ್ಕೂ ಹೆಚ್ಚು ವರ್ಷ ಕಾಲ ವಿವಿಧ ಕಾಲೇಜುಗಳಲ್ಲಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸಿರುವರು. 'ವಚನಾವಲೋಕನ', 'ಜಾನಪದ ಸಂಪತ್ತು', 'ಚಾಮರಾಜನಗರ ಜಿಲ್ಲೆಯ ಜಾತ್ರೆ ಮತ್ತು ಹಬ್ಬಗಳು' ಸೇರಿದಂತೆ ಹಲವಾರು ಮೌಲಿಕ ಕೃತಿಗಳನ್ನು ರಚಿಸಿದ್ದಾರೆ. ಹಲವಾರು ಸಂಶೋಧನಾ ಯೋಜನೆಗಳಲ್ಲಿ ಸದಸ್ಯರು, ಯೋಜನಾ ಸಹಾಯಕರಾಗಿ ಸೇವೆ ಸಲ್ಲಿಸಿರುವರು. ವಿವಿಧ ನಿಯತಕಾಲಿಕೆಗಳಲ್ಲಿ ಇವರ ಸಂಶೋಧನಾ ಲೇಖನಗಳು ಪ್ರಕಟವಾಗಿವೆ. ಹಲವಾರು ಸಂಘ–ಸಂಸ್ಥೆಗಳ ಪ್ರಶಸ್ತಿಗಳಿಗೆ ಪಾತ್ರರಾಗಿದ್ದಾರೆ.

**ಶ್ರೀ ಎಂ. ಶಿವಪ್ರಸಾದ್‌ರವರು** ಮೈಸೂರು ಶ್ರೀ ಅಂಕನಾಥೇಶ್ವರ ಗ್ರಾಫಿಕ್ಸ್ ಅಂಡ್ ಪ್ರಿಂಟರ್ಸ್‌ನ ಮಾಲೀಕರು. ಧರ್ಮಪತ್ನಿ ಶ್ರೀಮತಿ ಎ.ಜಿ. ಭವಾನಿ ಮೈಸೂರು ಜೆಎಸ್‌ಎಸ್ ಆಸ್ಪತ್ರೆಯಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಮಗಳು ಕು. ಎಂ.ಎಸ್. ಮಾನಸ ಎಂಎಸ್ ಪದವೀಧರರಾಗಿದ್ದು ಕೆನಡಾದಲ್ಲಿ ಉದ್ಯೋಗಿಯಾಗಿದ್ದಾರೆ. ಮಗ ಶ್ರೀ ಎಂ.ಎಸ್. ಶಶಾಂಕ್ ಮಾಲಿಕ್ಯುಲರ್ ಬಯಾಲಜಿಯಲ್ಲಿ ಎಂ.ಎಸ್.ಸಿ ಪದವಿ ಪಡೆದು ಹೈದರಾಬಾದ್‌ನಲ್ಲಿ ಇಂಟರ್ನ್‌ಶಿಪ್ ಮಾಡುತ್ತಿದ್ದಾರೆ.